ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

ವಿದ್ಯಾ ಸಂಸ್ಥೆಗಳು ಲೋಕೋಪಯೋಗಿ ಇಲಾಖೆಯಿಂದ ಕಟ್ಟಡ ಸ್ಥಿರತೆ ಪ್ರಮಾಣ ಪತ್ರವನ್ನು ಪಡೆಯುವ ವ್ಯವಸ್ಥೆಯಲ್ಲಿ ಬದಲಾವಣೆ ತರುವ ಬಗ್ಗೆ

ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) -

28 (200) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ವಿದ್ಯಾ ಸಂಸ್ಥೆಗಳು ಲೋಕೋಪಯೋಗಿ ಇಲಾಖೆಯಿಂದ ಕಟ್ಟಡ ಸ್ಥಿರತೆ ಪ್ರಮಾಣ ಪತ್ರವನ್ನು (Building stability/Safety Certificate) ಪಡೆದು ಹಾಜರುಪಡಿಸಬೇಕೆಂದು ಸರ್ಕಾರ ಆದೇಶ ಹೊರಡಿಸಿರುವುದು ನಿಜವೇ ; ಹಾಗಿದ್ದಲ್ಲಿ, ಸರ್ಕಾರಿ ಹಾಗೂ ಖಾಸಗಿ ಕಟ್ಟಡಗಳಿಗೂ ರಾಜ್ಯ ವ್ಯಾಪ್ತಿಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ಸ್ಥಿರತೆ ಪ್ರಮಾಣ ಪತ್ರವನ್ನು ಪಡೆಯಲಾಗುತ್ತಿದೆಯೇ ;

(ಆ) ಲೋಕೋಪಯೋಗಿ ಇಲಾಖೆಯಿಂದ ಸದರಿ ಪ್ರಮಾಣ ಪತ್ರ ನೀಡುವಲ್ಲಿ ವಿಳಂಭವಾಗುತ್ತಿರುವುದರಿಂದ ವಿದ್ಯಾಸಂಸ್ಥೆಗಳಿಗೆ ಆಗುತ್ತಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ವಿದ್ಯಾ ಸಂಸ್ಥೆಗಳೂ ಸೇರಿದಂತೆ ಎಲ್ಲಾ ಕಟ್ಟಡಗಳಿಗೂ ಆಯಾಯ ಜಿಲ್ಲೆ/ನಗರ ವ್ಯಾಪ್ತಿಯ ನೋಂದಾಯಿತ ಸ್ಟ್ರಕ್ಚರಲ್ ಇಂಜಿನಿಯರ್ (Structural Engineer) ಗಳಿಂದ ಅಥವಾ ಚಾರ್ಟಡ್ ಇಂಜಿನಿಯರ್ (Chartered Engineer) ಗಳಿಂದ ಸುರಕ್ಷಿತ ಪ್ರಮಾಣ ಪತ್ರ ಪಡೆಯುವ ಏಕರೂಪ ಕಾನೂನನ್ನು ಜಾರಿಗೆ ತರುವ ಯೋಜನೆ ಸರ್ಕಾರದ ಮುಂದಿದೆಯೇ ; (ವಿವರಗಳನ್ನು ನೀಡುವುದು)

(ಈ) ಸ್ಟಕ್ಚರಲ್ ಇಂಜಿನೀಯರ್ (Structural Engineer) ಪ್ರಮಾಣ ಪತ್ರ ನೀಡಲು ರಾಜ್ಯ ವ್ಯಾಪ್ತಿಯಲ್ಲಿರುವ ಲೋಕೋಪಯೋಗಿ ಇಲಾಖೆಯಲ್ಲಿ ಸಾಕಷ್ಟು ಸಕ್ಷಮತೆಯು (Competency) ಇದೆಯೇ ;

(ಉ) ಸ್ಥಿರತೆ ಪ್ರಮಾಣ ಪತ್ರವನ್ನು ವಿದ್ಯಾ ಸಂಸ್ಥೆಗಳಿಗೆ ಮಾತ್ರ ಅನ್ವಯ ಮಾಡಿರಲು ಕಾರಣವೇನು ಹಾಗೂ ಹೊರ ರಾಜ್ಯಗಳಲ್ಲಿ ಇದೇ ಪದ್ಧತಿಯನ್ನು ಅನುಸರಿಸಲಾಗುತ್ತಿದೆಯೇ ?